# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 436(557) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 20.02.2023 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ವಿಶ್ವವಿದ್ಯಾಲಯವು ಯಾವ ಶೈಕ್ಷಣಿಕ ಸಾಲಿನಿಂದ ಸ್ವತಂತ್ರವಾಗಿ ಕಾರ್ಯನಿರ್ವಹಿಸಲಿದೆ. ಸದರಿ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಡಲಿರುವ ಕಾಲೇಜುಗಳು ಎಷ್ಟು; (ಸಂಪೂರ್ಣ ವಿವರ ನೀಡುವುದು) | ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ, 2019ರಂತೆ ಮಂಡ್ಯದಲ್ಲಿ ಕೇಂದ್ರಸ್ಥಾನ ಹೊಂದಿರುವ ಮತ್ತು ಸರ್ಕಾರಿ ಕಾಲೇಜು (ಸ್ವಾಯತ್ತ), ಮಂಡ್ಯ ಇದರ ಮೇಲೆ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಏಕಾತ್ಮಕ ಸ್ವರೂಪದ ಮಂಡ್ಯ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿರುತ್ತದೆ.<br>ತದನಂತರದಲ್ಲಿ, ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ, 2022ರನ್ವಯ ಮಂಡ್ಯದಲ್ಲಿ ಕೇಂದ್ರಸ್ಥಾನ ಹೊಂದಿರುವ ಮಂಡ್ಯ ಜಿಲ್ಲೆ ಹಾಗೂ ಘಟಕ ಕಾಲೇಜಾಗಿ ಸರ್ಕಾರಿ ಕಾಲೇಜು (ಸ್ವಾಯತ್ತ), ಮಂಡ್ಯ ಇವುಗಳ ಮೇಲೆ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಸಂಯೋಜನೆಗೊಳಿಸುವ ವಿಶ್ವವಿದ್ಯಾಲಯವಾಗಿ ಮಂಡ್ಯ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿರುತ್ತದೆ.<br><br>ಸದರಿ ವಿಶ್ವವಿದ್ಯಾಲಯದ ವ್ಯಾಪ್ತಿಗೆ 47 ಕಾಲೇಜುಗಳು ಒಳಪಡಲಿದ್ದು, ಪ್ರಸ್ತುತ ಸದರಿ 47 ಕಾಲೇಜುಗಳು ಮೈಸೂರು ವಿಶ್ವವಿದ್ಯಾಲಯದ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯಲ್ಲಿದ್ದು, 2023-2024ನೇ ಸಾಲಿನಿಂದ ಮಂಡ್ಯ ವಿಶ್ವವಿದ್ಯಾಲಯದ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೆ ಒಳಪಡಲಿವೆ. |

<table>
<tr>
<td>(ಆ)</td>
<td>ಮಂಡ್ಯ ವಿಶ್ವವಿದ್ಯಾಲಯದಲ್ಲಿ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಉಳಿದಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಎಷ್ಟು; (ಬೋಧಕರ ಹುದ್ದೆಗಳ ವಿವರವನ್ನು ವಿಷಯವಾರು ನೀಡುವುದು)</td>
<td>ಮಂಡ್ಯ ವಿಶ್ವವಿದ್ಯಾಲಯದಲ್ಲಿ ಯಾವುದೇ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಮಂಜೂರಾಗಿರುವುದಿಲ್ಲ. ಆದರೆ, ಸರ್ಕಾರಿ ಕಾಲೇಜು (ಸ್ವಾಯತ್ತ), ಮಂಡ್ಯ ಇಲ್ಲಿನ ಕಾಲೇಜು ಶಿಕ್ಷಣ ಇಲಾಖೆಗೆ ಸೇರಿದ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಮಂಡ್ಯ ವಿಶ್ವವಿದ್ಯಾಲಯಕ್ಕೆ ವರ್ಗಾಯಿಸುವ ಪ್ರಸ್ತಾವನೆಯು ಸರ್ಕಾರದ ವ್ಯವಹರಣೆಯಲ್ಲಿರುತ್ತದೆ.<br><br>ಪ್ರಸ್ತುತ, ಮಂಡ್ಯ ವಿಶ್ವವಿದ್ಯಾಲಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಗೆ ಸೇರಿದ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಉಳಿದಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ವಿವರ ಈ ಕೆಳಗಿನಂತಿರುತ್ತದೆ.
<table>
<tr><td rowspan="2">ಕಾರ್ಯನಿರ್ವಹಿಸುತ್ತಿರುವ ಹುದ್ದೆ</td><td>ಬೋಧಕ</td><td>30</td></tr>
<tr><td>ಬೋಧಕೇತರ</td><td>2</td></tr>
<tr><td rowspan="2">ಖಾಲಿ ಉಳಿದಿರುವ ಹುದ್ದೆ</td><td>ಬೋಧಕ</td><td>66</td></tr>
<tr><td>ಬೋಧಕೇತರ</td><td>44</td></tr>
</table>
</td>
</tr>
<tr>
<td>(ಇ)</td>
<td>ಮಂಡ್ಯ ವಿಶ್ವವಿದ್ಯಾಲಯದಲ್ಲಿ ಪ್ರಾರಂಭವಾಗುವುದರಿಂದ ಎಷ್ಟು ಮಂದಿ ಬೋಧಕರು ಕಾಲೇಜು ಶಿಕ್ಷಣ ಇಲಾಖೆಗೆ ಹಿಂದಿರುಗಲು ಇಚ್ಛಿಸಿದ್ದಾರೆ; ಹಿಂದಿರುಗಲು ಕಾರಣಗೇನು: ಹಿಂದಿರುಗಿರುವ ಮತ್ತು ಉಳಿದಿರುವ ಬೋಧಕರ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)</td>
<td>ಮಂಡ್ಯ ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಲೇಜು ಶಿಕ್ಷಣ ಇಲಾಖೆಗೆ ಸೇರಿದ ಎಲ್ಲಾ ಬೋಧಕರು ಕಾಲೇಜು ಶಿಕ್ಷಣ ಇಲಾಖೆಗೆ ಹಿಂದಿರುಗಲು ಇಚ್ಛಿಸಿರುತ್ತಾರೆ.</td>
</tr>
<tr>
<td>(ಈ)</td>
<td>ಮಂಡ್ಯ ವಿಶ್ವವಿದ್ಯಾಲಯದಲ್ಲಿ ಹೊರಹೋಗಲು ಇಚ್ಛಿಸುವ ಕಾಲೇಜು ಶಿಕ್ಷಣ ಇಲಾಖೆ ಬೋಧಕರಿಗೆ ಹುದ್ದೆ ಸಹಿತ ಹಾಗೂ ಕಾರ್ಯಾಭಾರವಿರುವ ಸ್ಥಳಗಳಲ್ಲಿ ಅವಕಾಶಗಳನ್ನು ಕಲ್ಪಿಸಿಕೊಡುವ ಬಗ್ಗೆ ಸರ್ಕಾರದ ನಿಲುವೇನು;</td>
<td>ವಿಶ್ವವಿದ್ಯಾಲಯದ ಸೇವೆಯಲ್ಲಿ ಇರಲು ಇಚ್ಛಿಸದೆ ಕಾಲೇಜು ಶಿಕ್ಷಣ ಇಲಾಖೆಯ ಸೇವೆಯಲ್ಲಿ ಮುಂದುವರೆಯಲು ಇಚ್ಛಿಸುವ ಬೋಧಕರನ್ನು ಕಾಲೇಜು ಶಿಕ್ಷಣ ಇಲಾಖೆಯ ಕಾರ್ಯಭಾರವಿರುವ ಕಾಲೇಜುಗಳಲ್ಲಿ ಸ್ಥಳನಿಯುಕ್ತಿಗೊಳಿಸಲು ಕ್ರಮವಹಿಸಲಾಗುವುದು.</td>
</tr>
<tr>
<td>(ಉ)</td>
<td>ಪ್ರಸ್ತುತ ವಿಶ್ವವಿದ್ಯಾನಿಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಬೋಧಕರು ಹೊರಹೋದರೆ ವಿದ್ಯಾರ್ಥಿಗಳಿಗೆ ತೊಂದರೆಯಾಗುವುದಿಲ್ಲವೆ; ಹಾಗಿದ್ದಲ್ಲಿ, ಖಾಲಿ ಉಳಿಯುವ ಎಲ್ಲಾ ಹುದ್ದೆಗಳನ್ನು ಯಾವ ರೀತಿ ಭರ್ತಿ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಲಾಗುವುದು; (ವಿವರ</td>
<td>ಮಂಡ್ಯ ವಿಶ್ವವಿದ್ಯಾಲಯದಲ್ಲಿ ಬೋಧಕರ ಕಾರ್ಯಭಾರಕ್ಕಾಗಿ ವಿಶ್ವವಿದ್ಯಾಲಯದಿಂದ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಲಾಗುವುದು.<br><br>ಅಲ್ಲದೇ, ಪ್ರಸ್ತುತ ಮಂಡ್ಯ ವಿಶ್ವವಿದ್ಯಾಲಯದ ಅಡಿಯಲ್ಲಿ 47 ಕಾಲೇಜುಗಳು ಸಂಯೋಜನೆಗೊಳ್ಳುವುದರಿಂದ, ಅವುಗಳಲ್ಲಿ</td>
</tr>
</table>

| | | |
|---|---|---|
| | ನೀಡುವುದು) | ಕಾರ್ಯನಿರ್ವಹಿಸುತ್ತಿರುವ ಪೂರ್ಣಕಾಲಿಕ ಆಧ್ಯಾಪಕರುಗಳನ್ನು ಕೂಡ ಅಗತ್ಯತೆಗೆ ತಕ್ಕಂತೆ ನಿಯೋಜನೆ ಮುಖಾಂತರ ಅವರುಗಳ ಸೇವೆಯನ್ನು ಪಡೆಯಲಾಗುವುದು. |
| **(ಊ)** | ಮಂಡ್ಯ ವಿಶ್ವವಿದ್ಯಾಲಯದಲ್ಲಿ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆಯೇ; ಹಾಗಿದ್ದಲ್ಲಿ, ಉದ್ದೇಶಿತ ಕೋರ್ಸ್ ಗಳು ಯಾವುದು? (ವಿವರ ನೀಡುವುದು) | ಮಂಡ್ಯ ವಿಶ್ವವಿದ್ಯಾಲಯದಲ್ಲಿ MBA ಮತ್ತು MCA ಹೊಸ ಕೋರ್ಸುಗಳನ್ನು ಪ್ರಾರಂಭಿಸಲು ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ: ಇಡಿ/90/ಯುಆರ್‌ಸಿ/2023**

**(ಡಾ|| ಅಶ್ವತ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐಟಿ - ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ
ಉದ್ಯಮಶೀಲತೆ ಇಲಾಖೆ ಸಚಿವರು.